# ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

"ಜ್ಞಾನ ಸಂಗಮ" ಬೆಳಗಾವಿ – 590 018

**ರಾಷ್ಟ್ರೀಯ ಸೇವಾ ಯೋಜನೆ**

ಡಾ|| ಹೆಚ್.ಎನ್. ಜಗನ್ನಾಥ ರೆಡ್ಡಿ ಬಿ.ಇ., ಎಂ.ಇ., ಪಿಹೆಚ್.ಡಿ. ದೂರವಾಣಿ ಸಂ : 0831–2405468

ಕುಲಸಚಿವರು ಫ್ಯಾಕ್ಸ್ ಸಂ : 0831–2405467


ಸಂ. ವಿತಾವಿ/ಬಿ.ಜಿ.ಎಮ್/ರಾ.ಸೇ.ಯೋ/ಸಮಸ/SATS/2018-19/ 7342 ದಿನಾಂಕ: 16 NOV 2018

**:ಸುತ್ತೋಲೆ:**

**ವಿಷಯ:** 2018–19 ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು ವಿಸ್ತೃತವಾದ ಮತ್ತು ಪರಿಣಾಮಕಾರಿ ಸಮೀಕ್ಷೆಯನ್ನು ನಡೆಸುವ ಕುರಿತು.

**ಉಲ್ಲೇಖ:** 1. ಯುಸೇಇ:ರಾಸೇಯೋ/ಸಮನ/:2018–19/298 ದಿನಾಂಕ: 17.11.2018

2. ಸರ್ವಶಿಕ್ಷಣ ಅಭಿಯಾನ ಪತ್ರ ಸಂಖ್ಯೆ: ಸಶಿಅ/ಒಒಎಸ್‌ಸಿ/ಸಭೆ–ಆಯೋಜನೆ /2018–19 ದಿನಾಂಕ: 31.10.2018.

****

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂದಿಸಿದಂತೆ, 2018–19ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು ಶಾಲಾ ಮುಖ್ಯವಾಹಿನಿಗೆ ಬಂದ ಮಕ್ಕಳನ್ನು SATS (Student Achievement Tracking System) ಮೂಲಕ ಜಾಡು ಹಿಡಿಯುವ ಪ್ರಕ್ರಿಯೆ ಶಿಕ್ಷಣ ಇಲಾಖೆಯಲ್ಲಿ ಜಾರಿಯಲ್ಲಿದೆ. 2017–18 ನೇ ಶೈಕ್ಷಣಿಕ ಸಾಲಿನ ನೈಸರ್ಗಿಕ ಮುಂದುವರಿಕೆಯಾಗಿ 2018–19 ನೇ ಶೈಕ್ಷಣಿಕ ಸಾಲಿನಲ್ಲಿ 6 ರಿಂದ 16 ವರ್ಷ ವಯೋಮಾನದ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಸುಮಾರು 82,713 ಮಕ್ಕಳು ಶಾಲೆಯಿಂದ ಹೊರಗುಳಿದಿರುವಂತೆ ಕಂಡುಬಂದಿರುತ್ತದೆ. ಈ ಮಕ್ಕಳ ವಿಸ್ತೃತ ಮತ್ತು ಪರಿಣಾಮಕಾರಿಯಾದ ಸಮೀಕ್ಷೆ ನಡೆಸುವ ಅಗತ್ಯ ಇದೆ. ಈ ಸಮೀಕ್ಷೆಯನ್ನು ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಇಲಾಖೆಗಳ ಸಮನ್ವಯ ಸಾಧಿಸಿ, ಪಂಚಾಯಿತಿ ಸದಸ್ಯರು, ಎಸ್.ಡಿ.ಎಂ.ಸಿ ಸದಸ್ಯರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಎನ್.ಎಸ್.ಎಸ್. ಸ್ವಯಂ ಸೇವಕರ ಸಹಾಯದಿಂದ ತಂಡ ರಚಿಸಿಕೊಂಡು ಗ್ರಾಮ ಸಭೆ ನಡೆಸುವ ಮೂಲಕ ಪ್ರಾರಂಭಿಸಲಾಗುವುದು.

ಈ ಮೇಲಿನ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸೇವಾ ಯೋಜನೆಯ ಕಾರ್ಯಕ್ರಮ ಅಧಿಕಾರಿಗಳ ಮತ್ತು ಸ್ವಯಂ ಸೇವಕ/ಸೇವಕಿಯರು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಕೋರಲಾಗಿದೆ. ಇದಕ್ಕೆ ಸಂಬಂಧಿಸಿದ ವಿವರವಾದ ಸುತ್ತೋಲೆಯನ್ನು ಈ ಪತ್ರದೊಂದಿಗೆ ಲಗತ್ತಿಸಲಾಗಿದೆ. ಈ ಬಗ್ಗೆ ಸಮೀಪದ ಸ್ಥಳೀಯ ಶಾಲೆಯ ಮುಖ್ಯ ಶಿಕ್ಷಕರನ್ನು ಭೇಟಿಮಾಡಿ ಕಾರ್ಯಕ್ರಮಕ್ಕೆ ಕೈ ಜೋಡಿಸುವಂತೆ ಎಲ್ಲಾ ಕಾರ್ಯಕ್ರಮಾಧಿಕಾರಿಗಳಿಗೆ ನಿರ್ದೇಶನ ನೀಡಲು ಕೋರಲಾಗಿದೆ. ಕಾರ್ಯಕ್ರಮದ ವರದಿಯನ್ನು ವಿತಾವಿ., ಎನ್.ಎಸ್.ಎಸ್. ಕಛೇರಿಗೆ ನೀಡಲು ಕೋರಲಾಗಿದೆ. ಈ ಮಹತ್ವದ ಕಾರ್ಯಕ್ರಮದಲ್ಲಿ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳ ಎನ್.ಎಸ್.ಎಸ್. ಘಟಕಗಳು ಹೆಚ್ಚು ಪರಿಣಾಮಕಾರಿಯಾಗಿ ತೊಡಗಿಸಿಕೊಳ್ಳುವಂತೆ ಕೋರಲಾಗಿದೆ.

ವಂದನೆಗಳೊಂದಿಗೆ,

15/11/18

**ಕುಲಸಚಿವರು**

**ಇವರಿಗೆ,**

ಪ್ರಾಂಶುಪಾಲರು ಮತ್ತು ಸಂಯೋಜನಾಧಿಕಾರಿಗಳು, ವಿ.ತಾ.ವಿ. ಅಧಿನಕ್ಕೊಳಪಡುವ ಸಂಬಂದಪಟ್ಟ ಎಲ್ಲಾ ಅಭಿಯಾಂತ್ರಿಕ/ತಾಂತ್ರಿಕ ಮಹಾವಿದ್ಯಾಲಯಗಳು.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಕುಲಪತಿಗಳು, ವಿ.ತಾ.ವಿ., ಬೆಳಗಾವಿ ಇವರಿಗೆ ಕುಲಪತಿಗಳ ಕಾರ್ಯದರ್ಶಿಗಳ ಮುಖಾಂತರ.
2. ರಾಜ್ಯ ಎನ್.ಎಸ್.ಎಸ್. ಅಧಿಕಾರಿಗಳು ರಾ.ಸೇ.ಯೋ. ಕೋಶ, ಯುಸೇಇ, ಬೆಂಗಳೂರು.
3. ವಿಶೇಷಾಧಿಕಾರಿಗಳು, ಸಿ.ಎನ್.ಸಿ ವಿಭಾಗ, ವಿತಾವಿ., ಬೆಳಗಾವಿ, ಇವರಿಗೆ ಸದರಿ ಸುತ್ತೋಲೆಯನ್ನು ವಿ.ತಾ.ವಿ.ಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.
4. ಕಛೇರಿ ಕಡತಕ್ಕೆ.

ಸರ್ವ ಶಿಕ್ಷಣ ಅಭಿಯಾನ
ಕರ್ನಾಟಕ
ಎಲ್ಲರೂ ಕಲಿಯೋಣ - ಎಲ್ಲರೂ ಬೆಳೆಯೋಣ
ಹೊಸ ಸಾರ್ವಜನಿಕ ಕಚೇರಿಗಳು, ಕೆ ಆರ್ ವೃತ್ತ, ಬೆಂಗಳೂರು - ೫೬೦ ೦೦೧

ಸಂಖ್ಯೆ:ಸಶಿಅ/ಒಒಎಸ್‌ಸಿ/ಸಭೆ-ಆಯೋಜನೆ/2018-19 ದಿನಾಂಕ:31.10.2018

# ಸುತ್ತೋಲೆ

ವಿಷಯ: 2018-19 ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಲು ವಿಸ್ತೃತವಾದ ಮತ್ತು ಪರಿಣಾಮಕಾರಿ ಸಮೀಕ್ಷೆಯನ್ನು ನಡೆಸುವ ಕುರಿತು.

********

ಶಾಲಾ ಮುಖ್ಯವಾಹಿನಿಗೆ ಬಂದ ಮಕ್ಕಳನ್ನು SATS (Student Achievement Tracking System) ಮೂಲಕ ಜಾಡು ಹಿಡಿಯುವ ಪ್ರಕ್ರಿಯೆ ಶಿಕ್ಷಣ ಇಲಾಖೆಯಲ್ಲಿ ಜಾರಿಯಲ್ಲಿದೆ. 2017-18ನೇ ಶೈಕ್ಷಣಿಕ ಸಾಲಿನ ನೈಸರ್ಗಿಕ ಮುಂದುವರಿಕೆಯಾಗಿ 2018-19 ನೇ ಶೈಕ್ಷಣಿಕ ಸಾಲಿನಲ್ಲಿ 6 ರಿಂದ 16 ವರ್ಷ ವಯೋಮಾನದ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ಸುಮಾರು **82,713** ಮಕ್ಕಳ ಶಾಲೆಯಿಂದ ಹೊರಗುಳಿದಿರುವಂತೆ ಕಂಡುಬಂದಿರುತ್ತದೆ. ಈ ಮಕ್ಕಳ ವಿಸ್ತೃತ ಮತ್ತು ಪರಿಣಾಮಕಾರಿಯಾದ ಸಮೀಕ್ಷೆ ನಡೆಸುವ ಅಗತ್ಯ ಇದೆ. ಈ ಸಮೀಕ್ಷೆಯನ್ನು, ಶಿಕ್ಷಣ ಇಲಾಖೆ, ಕಾರ್ಮಿಕ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ನಗರಾಭಿವೃದ್ಧಿ ಇಲಾಖೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಆರೋಗ್ಯ ಇಲಾಖೆಗಳ ಸಮನ್ವಯ ಸಾಧಿಸಿ, ಪಂಚಾಯಿತಿ ಸದಸ್ಯರು. ಎಸ್.ಡಿ.ಎಂ.ಸಿ ಸದಸ್ಯರು. ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಎನ್.ಎಸ್.ಎಸ್ ಸ್ವಯಂಸೇವಕರ ಸಹಾಯದಿಂದ ತಂಡ ರಚಿಸಿಕೊಂಡು, ದಿನಾಂಕ:14.11.2018 ರಂದು ಮಕ್ಕಳ ಗ್ರಾಮ ಸಭೆ ನಡೆಸುವ ಮೂಲಕ ಪ್ರಾರಂಭಿಸಲಾಗುವುದು. ಈ ಸಮೀಕ್ಷೆಯ ಮಾಹಿತಿ ಸಂಗ್ರಹಣೆ ಮತ್ತು ಮೇಲ್ವಿಚಾರಣೆಗಾಗಿ ರಾಜ್ಯ. ಜಿಲ್ಲಾ. ತಾಲ್ಲೂಕು ಮಟ್ಟದಲ್ಲಿ ಸಮಿತಿ ರಚಿಸಲಾಗಿದೆ. ಪಟ್ಟಿಯನ್ನು ಅನುಬಂಧಿಸಿದೆ.

**ಸಮೀಕ್ಷಾ ವೇಳಾಪಟ್ಟಿ:**

| ಹಂತ | ಚಟುವಟಿಕೆಗಳು | ದಿನಾಂಕ |
|---|---|---|
| 1 | ಶಾಲಾ ಮುಖ್ಯಶಿಕ್ಷಕರು ಮಕ್ಕಳ ಗ್ರಾಮಸಭೆಯಲ್ಲಿ ಶಾಲೆಯಿಂದ ಹೊರಗುಳಿದ ಮತ್ತು ಶಾಲೆಗೆ ದಾಖಲಾಗದ ಹಾಗೂ SATS ತಂತ್ರಾಂಶದಲ್ಲಿ ಅಪ್‌ಡೇಟ್ ಆಗದ ಮಕ್ಕಳ ಮಾಹಿತಿಯನ್ನು ಗ್ರಾಮ ಸಭೆಯಲ್ಲಿ ಹಂಚಿಕೊಳ್ಳುವುದು ಹಾಗೂ ಗ್ರಾಮಸ್ಥರ ಸಹಕಾರದಿಂದ ವಿವರ ಪತ್ತೆ ಹಚ್ಚುವುದು. | 14.11.2018 |
| 2 | ನಂತರ ಮುಖ್ಯಶಿಕ್ಷಕರು, ಶಿಕ್ಷಕರು ಹಾಗೂ ತಂಡದೊಂದಿಗೆ ಮನೆ-ಮನೆ ಮತ್ತು ಇತರೆ ಸ್ಥಳಗಳಲ್ಲಿ ಭೇಟಿ ನೀಡಿ ಶಾಲೆ ಬಿಟ್ಟ ಮಕ್ಕಳನ್ನು ಗುರುತಿಸುವುದು ಹಾಗೂ ನಮೂನೆಗಳನ್ನು ತುಂಬುವುದು. | 17.11.2018 ರಿಂದ 28.11.2018 |
| 3 | ಸಂಗ್ರಹಿಸಲಾದ ವರದಿಯನ್ನು SATS ತಂತ್ರಾಂಶದಲ್ಲಿ ಅಳವಡಿಸುವುದು. | 29.11.2018 ರಿಂದ 15.12.2018 |

**ಗ್ರಾಮ/ವಾರ್ಡ್** ಸಮಿತಿಯು ಸ್ಥಳೀಯ ಸಂಸ್ಥೆಯ ಸದಸ್ಯರು, ಎಸ್.ಡಿ.ಎಂ.ಸಿ ಸದಸ್ಯರು, ಪೌರಾಯುಕ್ತರು. ಮುಖ್ಯಾಧಿಕಾರಿ, ಮುಖ್ಯಶಿಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಎನ್.ಎಸ್.ಎಸ್/ಎನ್.ಸಿ.ಸಿ/ಸ್ಕೌಟ್ಸ್ ಅಂಡ್ ಗೈಡ್ಸ್/ಸೇವಾದಳ, ಹಳೆವಿದ್ಯಾರ್ಥಿಗಳ ಸಂಘ. ಸ್ತ್ರೀಶಕ್ತಿ ಸಂಘ. ಯುವಶಕ್ತಿ ಸಂಘ ಮತ್ತು ಎನ್.ಜಿ.ಒಗಳ ಸಹಯೋಗದೊಂದಿಗೆ ಸಮೀಕ್ಷೆಯನ್ನು ವಿಸ್ತೃತವಾಗಿ ಮತ್ತು

ಪರಿಣಾಮಕಾರಿಯಾಗಿ ನಡೆಸುವುದು. ಜಿಲ್ಲೆ, ತಾಲ್ಲೂಕು ಮತ್ತು ಪಂಚಾಯಿತಿ ಹಂತದಲ್ಲಿ ಕ್ರಮವಾಗಿ ಜಿಲ್ಲಾಧಿಕಾರಿಗಳು, ತಹಶೀಲ್ದಾರ್, ಪಿಡಿಒ ನೇತೃತ್ವದಲ್ಲಿ ಪೂರ್ವಭಾವಿ ಸಭೆಗಳನ್ನು 05.12.2018 ರಿಂದ 09.11.2018 ರೊಳಗೆ ನಡೆಸುವುದು. ಈ ಸಭೆಗಳ ಸಂಪೂರ್ಣ ಜವಾಬ್ದಾರಿಯನ್ನು ಉಪನಿದೇಶಕರು(ಆಡಳಿತ) ಹಾಗೂ ಕ್ಷೇತ್ರಶಿಕ್ಷಣಾಧಿಕಾರಿಗಳು ಕಡ್ಡಾಯವಾಗಿ ನಿರ್ವಹಿಸುವುದು. ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸುವಾಗ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆಯ ಕಾರ್ಮಿಕರನ್ನು ಗುರುತಿಸುವಾಗ ಉದ್ಯೋಗ ಮತ್ತು ಕಾರ್ಮಿಕ ಮಂತ್ರಾಲಯ, ಭಾರತ ಸರ್ಕಾರ ಅಂತಿಮಗೊಳಿಸಿರುವ ನಮೂನೆಗಳಲ್ಲಿ ಈಗಾಗಲೇ ಸಂಗ್ರಹಿಸಿದ ಮಾಹಿತಿಯನ್ನು ಪರಿಶೀಲಿಸಿ, ಭರ್ತಿ ಮಾಡುವುದು.

**<u>ಸಮೀಕ್ಷೆಯ ಹಂತಗಳು:</u>**

**1 : ಪ್ರತಿ ಶಾಲೆ ಹಂತದಲ್ಲಿ ಶಾಲೆಗೆ ಸೇರಿ ಬಿಟ್ಟ ಮಕ್ಕಳನ್ನು ಗುರುತಿಸುವುದು:**

1. 2018-19 ನೇ ಸಾಲಿನಲ್ಲಿ 6-16 ವಯೋಮಾನದ ಮಕ್ಕಳು ಶಾಲೆಗೆ ದಾಖಲಾಗದ್ದಿದಲ್ಲಿ ಅಂತಹ ಮಕ್ಕಳನ್ನು ಗುರುತಿಸಿ ಸ್ಯಾಟ್ಸ್ ತಂತ್ರಾಂಶದಲ್ಲಿ ಇಂದೀಕರಿಸುವುದು. ಮುಖ್ಯಶಿಕ್ಷಕರು ಶಾಲಾವಾರು ಶಾಲೆ ಬಿಟ್ಟ ಮಕ್ಕಳ ಪಟ್ಟಿಯನ್ನು ಸ್ಯಾಟ್ಸ್‌ನಿಂದ ತೆಗೆದುಕೊಳ್ಳುವುದು. ಪ್ರತಿ ಶಾಲಾ ಹಂತದಲ್ಲಿ ತರಗತಿವಾರು ಕಳೆದ ಶೈಕ್ಷಣಿಕ ಸಾಲಿನಲ್ಲಿ ದಿನಾಂಕ:**10.04.2018** ರಲ್ಲಿದ್ದಂತೆ ಮಕ್ಕಳ ದಾಖಲಾತಿಗೂ, ಈ ಶೈಕ್ಷಣಿಕ ಸಾಲಿನಲ್ಲಿ ದಿನಾಂಕ:**30.09.2018** ರಲ್ಲಿದ್ದಂತೆ ದಾಖಲಾಗಿರುವ ಮಕ್ಕಳ ಸಂಖ್ಯೆಯಲ್ಲಿ ವ್ಯತ್ಯಾಸವಿದ್ದಲ್ಲಿ ಮಕ್ಕಳ ಪಟ್ಟಿಯನ್ನು ತಯಾರಿಸಿಕೊಂಡು, ಶಾಲೆಯಿಂದ ಹೊರಗೆ ಉಳಿದಿರುವ ಬಗ್ಗೆ ಪರಿಶೀಲಿಸಬೇಕು. ಈ ಪ್ರಕ್ರಿಯೆಯಲ್ಲಿ ಮರಣ, ವಲಸೆ, ನಕಲಿ ದಾಖಲಾತಿ ಇತ್ಯಾದಿ ಕಾರಣಗಳಿಂದ ಇರುವ ಮಕ್ಕಳನ್ನು ಸಿ.ಆರ್.ಪಿ. ರವರ ಪರಿಶೀಲನೆ ಹಾಗೂ ದೃಢೀಕರಣದೊಂದಿಗೆ ಶಾಲೆಯಿಂದ ಹೊರಗುಳಿದ ಮಕ್ಕಳ ಪಟ್ಟಿಯಿಂದ ತೆಗೆದು ಹಾಕಿ, ಪರಿಷ್ಕೃತ ಪಟ್ಟಿ ಸಿದ್ಧಪಡಿಸಬೇಕು ಮತ್ತು ಈ ಬಗ್ಗೆ SATS ನಲ್ಲಿ ಇಂದೀಕರಿಸುವುದು.
2. ಶಾಲಾ ಸಮೀಕ್ಷೆಯಲ್ಲಿ ದೊರೆತ ಶಾಲೆ ಬಿಟ್ಟ ಮಕ್ಕಳ ಮನೆಗಳಿಗೆ ಮತ್ತು ಇತರೆ ಪ್ರದೇಶಗಳಿಗೆ ಅಂದರೆ ಬಂದಿಖಾನೆಗಳು, ಕಟ್ಟಡ ಕಾಮಗಾರಿ ನಡೆಯುವ ಸ್ಥಳಗಳು, ಮದರಸದಲ್ಲಿ ಕಲಿಯುತ್ತಿರುವ ಮಕ್ಕಳು, ಆಸ್ಪತ್ರೆ, ಹೋಟೆಲ್, ಛತ್ರಗಳು, ಚಿತ್ರಮಂದಿರಗಳು, ಸಣ್ಣ ಕಾರ್ಖಾನೆಗಳು, ಇಟ್ಟಿಗೆ ತಯಾರಿಸುವ ಸ್ಥಳ, ಮಂಡಕ್ಕಿ ಭಟ್ಟಿಗಳು, ಕೃಷಿ ಮತ್ತು ತೋಟಗಾರಿಕೆ ಪ್ರದೇಶಗಳು, ಎಸ್ಟೇಟ್‌ಗಳು, ಪ್ಲಾಂಟೇಷನ್‌ಗಳು, ರಸ್ತೆ ಕಾಮಗಾರಿ, ಗಣಿ ಪ್ರದೇಶ, ಕ್ವಾರಿಗಳು, ಗುಡ್ಡಗಾಡು ಪ್ರದೇಶ, ಬುಡಕಟ್ಟು ಜನಾಂಗ ಪ್ರದೇಶ(Tribal area), ಕಾಡು ಪ್ರದೇಶ, ಮೀನುಗಾರಿಕೆ ಪ್ರದೇಶ, ಬಂದರು ಪ್ರದೇಶ, ಐತಿಹಾಸಿಕ ಸ್ಥಳಗಳು, ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳು ಮತ್ತು ಇನ್ನಿತರೆ ಸ್ಥಳಗಳಲ್ಲಿ ಭೇಟಿ ನೀಡಿ, ಆ ಮಕ್ಕಳು ಶಾಲೆಯಿಂದ ಹೊರಗೆ ಉಳಿದಿರುವ ಬಗ್ಗೆ ಪರಿಶೀಲಿಸುವುದು.
3. ಸದರಿ ಸಮೀಕ್ಷೆ ನಡೆಸುವಾಗ ಆಯಾ ಮಗುವಿನ ಆಧಾರ್ ಸಂಖ್ಯೆಯು ಲಭ್ಯವಿದ್ದಲ್ಲಿ ದಾಖಲಿಸುವುದು. ಮಗುವು ಆಧಾರ್ ಸಂಖ್ಯೆ ಹೊಂದದಿದ್ದಲ್ಲಿ, ಅಂತಹ ಮಕ್ಕಳ ಆಧಾರ್ ಸಂಖ್ಯೆಯನ್ನು ಪಡೆಯಲು ಅಗತ್ಯ ಕ್ರಮವಹಿಸುವುದು.
4. ಸಮೀಕ್ಷೆಯಲ್ಲಿ ಗುರುತಿಸಲಾಗುವ ಶಾಲೆಬಿಟ್ಟ ಮತ್ತು ಶಾಲೆಗೆ ದಾಖಲಾಗದ ಮಕ್ಕಳ ಮಾಹಿತಿಯನ್ನು SATS ನ, ಒಓಎಸ್‌ಸಿ ತಂತ್ರಾಂಶದಲ್ಲಿ ದಾಖಲಿಸುವುದು.
5. ಹೊರ ರಾಜ್ಯಗಳಿಂದ ಬಂದಿರುವ ಮತ್ತು ಹೊರ ರಾಜ್ಯಗಳಿಗೆ ವಲಸೆ ಹೋಗಿರುವ ಮಕ್ಕಳ ಮಾಹಿತಿಯನ್ನು ಪ್ರತ್ಯೇಕ ನಮೂನೆಗಳಲ್ಲಿ ನೀಡುವುದು.
6. ಸಿ.ಆರ್.ಪಿ ಮತ್ತು ಮುಖ್ಯಶಿಕ್ಷಕರು ತಮ್ಮ ವ್ಯಾಪ್ತಿಯ ಎಲ್ಲಾ ಶಾಲೆಗಳಿಂದ ಶಾಲೆ ಬಿಟ್ಟ ಮತ್ತು ಶಾಲೆಗೆ ದಾಖಲಾಗದ ಮಕ್ಕಳ ಮಾಹಿತಿಯನ್ನು ಕ್ರೂಢೀಕರಿಸಿ, SATS ತಂತ್ರಾಂಶದಲ್ಲಿ ದಿನಾಂಕ:15.12.2018 ರೊಳಗೆ ಇಂದೀಕರಿಸುವುದು.

2 : **ಸಮೀಕ್ಷೆಯಲ್ಲಿ ಗುರುತಿಸಿದ ಮಕ್ಕಳ ಪಟ್ಟಿಯನ್ನು ಎನ್.ಜಿ.ಓಗಳ ಮತ್ತು ಸಾರ್ವಜನಿಕರ ಸಹಯೋಗದೊಂದಿಗೆ ಅಂತಿಮಗೊಳಿಸುವುದು:**

ಸಮೀಕ್ಷೆಯ ಆಧಾರದಲ್ಲಿ ಕ್ರೂಢೀಕರಿಸಿದ ಮಾಹಿತಿಯನ್ನು ದಿನಾಂಕ:**18.12.2018**ರ ಸಂಜೆ 5.30 ರೊಳಗೆ ವಿವಿಧ ಹಂತಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸುವುದು. ಪ್ರಕಟಿತ ಮಾಹಿತಿಯ ಕುರಿತು ದಾಖಲೆಗಳನ್ನು ನಿರ್ವಹಿಸಿ ಸಂರಕ್ಷಿಸುವುದು. ನಂತರ ಜಿಲ್ಲೆಯಲ್ಲಿರುವ ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಸ್ಥಳೀಯ ಸ್ವಯಂ ಸೇವಾ ಸಂಸ್ಥೆಯವರೊಂದಿಗೆ ದಿನಾಂಕ:**19.12.2018** ರಂದು ಜಿಲ್ಲಾ ಉಪನಿರ್ದೇಶಕರ ಕಛೇರಿಯಲ್ಲಿ ಸಭೆ ನಡೆಸುವುದು. ಹಾಗೂ ಸದರಿ ಎನ್.ಜಿ.ಓಗಳು ಗುರುತಿಸಿರುವ ಶಾಲೆಯಿಂದ ಹೊರಗುಳಿದ ಮಕ್ಕಳ ಮಾಹಿತಿಯನ್ನು ಸದರಿ ಸಮೀಕ್ಷೆ ಮಾಹಿತಿಯೊಂದಿಗೆ ವಿನಿಮಯ ಮಾಡಿಕೊಳ್ಳುವುದು.

ಸದರಿ ಪಟ್ಟಿಯಲ್ಲಿ ವ್ಯತ್ಯಾಸವಿದ್ದಲ್ಲಿ **21.12.2018** ರೊಳಗೆ ಆಯಾ ಎನ್.ಜಿ.ಓಗಳೊಂದಿಗೆ ಕ್ಷೇತ್ರ ಭೇಟಿ ಮಾಡಿ ನಿಖರವಾಗಿ ಪತ್ತೆಯಾದ ಮಕ್ಕಳ ಮಾಹಿತಿಯನ್ನು ಅಂತಿಮಗೊಳಿಸಬೇಕು. ಹೀಗೆ ಅಂತಿಮಗೊಂಡ ಶಾಲೆ ಬಿಟ್ಟ ಮತ್ತು ಶಾಲೆಗೆ ದಾಖಲಾಗದ ಮಕ್ಕಳ ಒಟ್ಟು ಸಂಖ್ಯೆಯನ್ನು ಜಿಲ್ಲಾ ಮತ್ತು ತಾಲ್ಲೂಕು ಸಮಿತಿಯಲ್ಲಿ ಮಂಡಿಸಿ. 2019–20ನೇ ಸಾಲಿಗೆ ಮುಖ್ಯವಾಹಿನಿಗೆ ತರಬೇಕಾದ ಗುರಿ ಆಗಿರುತ್ತದೆ.

ಅಂತಿಮವಾದ ಮಕ್ಕಳ ಸಂಖ್ಯೆಯನ್ನು 2019–20ನೇ ಸಾಲಿನ ಸಮಗ್ರ ಶಿಕ್ಷಣ ಅಭಿಯಾನ ಜಿಲ್ಲಾ ವಾರ್ಷಿಕ ಕ್ರಿಯಾ ಯೋಜನೆಯಲ್ಲಿ ಅಳವಡಿಸಿ, ಕಾರ್ಯತಂತ್ರ ರೂಪಿಸಬೇಕು ಹಾಗೂ ಶಾಲೆಯಿಂದ ಹೊರಗುಳಿದ ಮಕ್ಕಳ ಪಟ್ಟಿ ಅಂತಿಮಗೊಳಿಸಿ ಸದರಿ ಮಾಹಿತಿಯನ್ನು ರಾಜ್ಯ ಕಛೇರಿಗೆ ದಿನಾಂಕ:24.12.2018ರೊಳಗೆ SATS ತಂತ್ರಾಂಶದ ಮೂಲಕ ಸಲ್ಲಿಸುವುದು.

**ವಿಶೇಷ ಸೂಚನೆ:–**

1. ನಗರ ಪ್ರದೇಶದ ಬಾಲ ಕಾರ್ಮಿಕರಿಗೆ ಸಂಬಂಧಿಸಿದಂತೆ ಕಾರ್ಮಿಕ ಇಲಾಖೆ ಜಿಲ್ಲೆಗಳಲ್ಲಿ ಸಂಗ್ರಹಿಸಿರುವ ಸಮೀಕ್ಷೆ ವರದಿಯನ್ನು ಜಿಲ್ಲಾಧಿಕಾರಿಗಳ ಕಛೇರಿಯ ಯೋಜನಾ ನಿರ್ದೇಶಕರು ಕಾರ್ಮಿಕ ಇಲಾಖೆ ಇವರಿಂದ ಮತ್ತು ಸಬಲ ಕಾರ್ಯಕ್ರಮದಡಿ 11 ರಿಂದ 14 ವರ್ಷದ ಶಾಲೆಬಿಟ್ಟ ಹೆಣ್ಣು ಮಕ್ಕಳ ಮಾಹಿತಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಲಭ್ಯವಿದ್ದು, ಉಪನಿರ್ದೇಶಕರು (ಆ) ಸಾ.ಶಿ.ಇ ಸದರಿ ವರದಿಗಳನ್ನು ಪಡೆದು ಸಮೀಕ್ಷಾ ಕಾರ್ಯಕ್ಕೆ ಬಳಸುವುದು.
2. ಸಮೀಕ್ಷೆ ಪ್ರಾರಂಭಕ್ಕೆ ಒಂದು ವಾರ ಮುಂಚಿತವಾಗಿ ಸಮುದಾಯ ಹಾಗೂ ಸಾರ್ವಜನಿಕರ ಗಮನಕ್ಕೆ ಬರುವಂತೆ ಪ್ರಚಾರ ಕಾರ್ಯ ಕೈಗೊಳ್ಳಬೇಕು. ಸಮೀಕ್ಷೆ ನಡೆಸುತ್ತಿರುವ ಉದ್ದೇಶ ಮತ್ತು ಮಹತ್ವವನ್ನು ಎಸ್.ಡಿ.ಎಂ.ಸಿ ಸದಸ್ಯರು, ಪೋಷಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳಿಗೆ ಮನವರಿಕೆ ಮಾಡಿಕೊಡುವುದು ಹಾಗೂ ಸಮೀಕ್ಷೆ ಕಾರ್ಯದಲ್ಲಿ ಸ್ಥಳೀಯ ಸಂಸ್ಥೆಗಳ ಸದಸ್ಯರುಗಳು ಭಾಗವಹಿಸುವಂತೆ ನೋಡಿಕೊಳ್ಳುವುದು ಅಗತ್ಯವಾಗಿದೆ.
3. ಕೊಳಚೆ ಹಾಗೂ ಇತರೆ ಪ್ರದೇಶಗಳನ್ನು ಸೇರಿಸಿಕೊಂಡು ಸಮೀಕ್ಷೆ ನಡೆಸುವುದು. ಕೊಳಚೆ ಪ್ರದೇಶಗಳಲ್ಲಿ ಶಾಲಾ ಲಭ್ಯತೆ ಕುರಿತ ಸಮೀಕ್ಷೆಯನ್ನು ಕೊಳಚೆ ನಿರ್ಮೂಲನಾ ಮಂಡಳಿ. ಕಾರ್ಮಿಕ ಇಲಾಖೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ. ಆಸಕ್ತಿವುಳ್ಳ ಸ್ಥಳೀಯ ಸರ್ಕಾರೇತರ ಸಂಸ್ಥೆಗಳ ಪ್ರತಿನಿಧಿ ಹಾಗೂ ನಗರ ಸಭೆ/ಬಿ.ಬಿ.ಎಂ.ಪಿ. ಸಹಕಾರದೊಂದಿಗೆ ಕೈಗೊಳ್ಳುವುದು.
4. ಡಯಟ್ ಹಂತದಲ್ಲಿ ಸದರಿ ಸಮೀಕ್ಷೆ ಕಾರ್ಯಕ್ಕೆ ಪ್ರತಿ ತಾಲ್ಲೂಕಿಗೆ ಒಬ್ಬ ನೋಡಲ್ ಅಧಿಕಾರಿಯನ್ನು ನೇಮಿಸಿ. ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಸಹಯೋಗದೊಂದಿಗೆ ಸಮೀಕ್ಷಾ ಪ್ರಕ್ರಿಯೆಯಲ್ಲಿ ಭಾಗವಹಿಸಿ ಕಡ್ಡಾಯವಾಗಿ ಮೇಲ್ವಿಚಾರಣೆ ನಡೆಸುವುದು.
5. ಸಮೀಕ್ಷೆ ವೇಳೆಯಲ್ಲಿ ನಿರಂತರ ಗೈರುಹಾಜರಾದ ಮಗುವನ್ನು ಶಾಲೆಯಿಂದ ಹೊರಗುಳಿದ ಮಗುವೆಂದು ಪರಿಗಣಿಸುವುದು. ಅನಂತರ ಮಗುವಿನ ವಯಸ್ಸನ್ನು ಪರಿಗಣಿಸುವಾಗ ದಿನಾಂಕ:31.05.2018 ಕ್ಕೆ ಆರು ವರ್ಷ ಪೂರ್ಣಗೊಳಿಸಿದ್ದು, ಶಾಲೆಗೆ ದಾಖಲಾಗದೇ ಇದ್ದಲ್ಲಿ ಅಂತಹ ಮಗುವನ್ನು ಶಾಲೆಗೆ ಸೇರದ ಮಗು (Never Enrolled) ಎಂದು ಪರಿಗಣಿಸುವುದು.

6. 2018–19ನೇ ಸಾಲಿಗೆ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಗುರುತಿಸಿರುವ ಸಂದರ್ಭದಲ್ಲಿ ಸಿ.ಡಬ್ಲ್ಯು.ಎಸ್.ಎನ್ ಶಾಖೆಗೆ ಸಿದ್ದಪಡಿಸುವ ಕ್ರಿಯಾ ಯೋಜನೆಯಲ್ಲಿ ಹೆಚ್.ಬಿ.ಇ. ಮತ್ತು ಎಸ್.ಆರ್.ಪಿ. ಮಕ್ಕಳನ್ನು ಹೊರತುಪಡಿಸಿ ಹೊಸದಾಗಿ ದೊರೆತ ಹೆಚ್.ಬಿ.ಇ. ಮತ್ತು ಎಸ್.ಆರ್.ಪಿ. ಮಕ್ಕಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಬೇಕು.

7. ಮದರಸ ಕೇಂದ್ರಗಳಲ್ಲಿ ಇರುವ ಮಕ್ಕಳು ಔಪಚಾರಿಕ ಶಿಕ್ಷಣ ಪಡೆಯುತ್ತಿದ್ದಲ್ಲಿ, ಅಂತಹ ಮಕ್ಕಳನ್ನು ಓಓಎಸ್‌ಸಿ ಎಂದು ಪರಿಗಣಿಸಬಾರದು.

8. 2018–19ನೇ ಸಾಲಿಗೆ ಈಗಾಗಲೇ ಮುಖ್ಯವಾಹಿನಿಗೆ ಬಂದ ಎಲ್ಲಾ ಮಕ್ಕಳ ಮಾಹಿತಿಯನ್ನು ವಿದ್ಯಾವಾಹಿನಿ ತಂತ್ರಾಂಶದಲ್ಲಿ ದಿನಾಂಕ: **28.12.2018** ರೊಳಗೆ ಕಡ್ಡಾಯವಾಗಿ ನಮೂದಿಸುವುದು.

9. ಆಕಸ್ಮಿಕವಾಗಿ ಸಮೀಕ್ಷೆಯಲ್ಲಿ ಗುರುತಿಸದೇ ಇರುವ ಮಗು ತಮ್ಮ ಶಾಲಾ ವ್ಯಾಪ್ತಿಯಲ್ಲಿ ಕಂಡುಬಂದರೆ ಕೂಡಲೇ ಸಮೀಕ್ಷೆ ಪಟ್ಟಿಯಲ್ಲಿ ಸೇರಿಸಿಕೊಳ್ಳುವುದು ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಸಹಶಿಕ್ಷಕರ ಜವಾಬ್ದಾರಿಯಾಗಿರುತ್ತದೆ.

10. ಶಾಲೆಯಿಂದ ಹೊರಗುಳಿದ ಮಕ್ಕಳು (7+ ರಿಂದ 15+ ವಯೋಮಾನ) ಕಂಡು ಬರುವ ಪ್ರದೇಶಗಳಲ್ಲಿ ಎಚ್ಚರಿಕೆಯಿಂದ ನಿರಂತರತೆಯನ್ನು ಸಾಧಿಸುವ ನಿಟ್ಟಿನಲ್ಲಿ ಎಲ್ಲಾ ಸ್ತರದ ಅಧಿಕಾರಿಗಳು ಸಕ್ರಿಯವಾಗಿ ಪಾಲ್ಗೊಂಡು ಮಾಹಿತಿಯನ್ನು ಸಂಗ್ರಹಿಸಲು ಮತ್ತು ಸಂಗ್ರಹಿತ ಮಾಹಿತಿಯನ್ನು ಆಯಾ ದಿನವೇ SATS ತಂತ್ರಾಂಶದಲ್ಲಿ ದಾಖಲಿಸಲು ತಿಳಿಸಿದೆ.

ಮೇಲ್ಕಂಡಂತೆ ಸಮೀಕ್ಷೆಗಾಗಿ ಬಳಸುವ ನಮೂನೆಗಳು SATS ತಂತ್ರಾಂಶದಲ್ಲಿ ಲಭ್ಯವಿದ್ದು, ಸದರಿ ನಮೂನೆಯ ಮುದ್ರಣ ವೆಚ್ಚವನ್ನು ಜಿಲ್ಲಾ ಆಡಳಿತಾತ್ಮಕ ವೆಚ್ಚದಲ್ಲಿ ನಿಯಮಾನುಸಾರ ಭರಿಸಲು ಅನುಮತಿಸಿದೆ. ಸದರಿ ಸಮೀಕ್ಷೆಯಲ್ಲಿ ಗುರುತಿಸಲಾಗುವ ಮಕ್ಕಳ ಮಾಹಿತಿಯನ್ನು ಕಡ್ಡಾಯವಾಗಿ SATS ನ ಓಓಎಸ್‌ಸಿ ತಂತ್ರಾಂಶದಲ್ಲಿ ಅಳವಡಿಸುವುದು. ತಪ್ಪಿದ್ದಲ್ಲಿ ಸಮೀಕ್ಷೆ ಅಪೂರ್ಣವೆಂದು ಪರಿಗಣಿಸಿ ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರ ಮೇಲೆ ಶಿಸ್ತು ಕ್ರಮವಹಿಸಲಾಗುವುದು.

ಸಹಿ/–
ಪ್ರಧಾನ ಕಾರ್ಯದರ್ಶಿಗಳು
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ

ಸಹಿ/–
ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಸಹಿ/–
ಪ್ರಧಾನ ಕಾರ್ಯದರ್ಶಿಗಳು
ಕಾರ್ಮಿಕ ಇಲಾಖೆ

ಸಹಿ/–
ಪ್ರಧಾನ ಕಾರ್ಯದರ್ಶಿಗಳು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ರಾಜ್ಯ ಯೋಜನಾ ನಿರ್ದೇಶಕರು
ಸಮಗ್ರ ಶಿಕ್ಷಣ ಅಭಿಯಾನ–ಕರ್ನಾಟಕ

ಅಗತ್ಯ ಕ್ರಮಕ್ಕಾಗಿ:

ರಾಜ್ಯದ ಎಲ್ಲಾ ಡಿ.ಡಿ.ಪಿ.ಐ (ಆಡಳಿತ) ಮತ್ತು ಡಿ.ವೈ.ಪಿ.ಸಿ. ಸ.ಶಿ.ಅ ಇವರಿಗೆ ಕಳುಹಿಸುತ್ತಾ ಸುತ್ತೋಲೆ ತಲುಪಿದ ಕೂಡಲೇ ಪ್ರತಿಯನ್ನು ಸಂಬಂಧಿಸಿದ ಎಲ್ಲರಿಗೂ ಒದಗಿಸಿ, ವೇಳಾಪಟ್ಟಿಯಂತೆ ಪೂರ್ವಭಾವಿ ಸಭೆ ಮತ್ತು ಸಮೀಕ್ಷೆ ನಡೆಸಲು ಹಾಗೂ ವರದಿಗಳನ್ನು ಸುತ್ತೋಲೆಯ ಸೂಚನೆಗಳನ್ವಯ ಸಲ್ಲಿಸಲು ಕ್ರಮವಹಿಸುವುದು.

ಪ್ರತಿಯನ್ನು ಗೌರವಪೂರ್ವಕವಾಗಿ:

1. ಮಾನ್ಯ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಇವರ ಆಪ್ತಶಾಖೆಗೆ ಕಳುಹಿಸುತ್ತಾ ಮಾನ್ಯರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ವಿಧಾನಸೌಧ ಇವರ ಆಪ್ತಶಾಖೆಗೆ ಕಳುಹಿಸುತ್ತಾ ಮಾನ್ಯರ ಗಮನಕ್ಕೆ ತರಲು ಕೋರಿದೆ.

ಪ್ರತಿಯನ್ನು ಮಾಹಿತಿಗಾಗಿ:

1. ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ, ವಿಧಾನಸೌಧ.
2. ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಧಾನಸೌಧ.
3. ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನಸೌಧ.
4. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು.
6. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್.
8. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
9. ಆಯುಕ್ತರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಆಯುಕ್ತರು, ಕಾರ್ಮಿಕ ಕಲ್ಯಾಣ ಇಲಾಖೆ, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
12. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ.
13. ರಾಜ್ಯದ ಎಲ್ಲಾ ತಾಲ್ಲೂಕುಗಳ ತಹಶೀಲ್ದಾರರಿಗೆ.
14. ಪೊಲೀಸ್ ಮಹಾನಿರ್ದೇಶಕರು(ತರಬೇತಿ),ಕಾರ್ಲಟನ್ ಹೌಸ್, ಪ್ಯಾಲೇಸ್ ರಸ್ತೆ, ಬೆಂಗಳೂರು.
15. ಪೊಲೀಸ್ ಮಹಾನಿರ್ದೇಶಕರು ಇನ್‌ಫ್ಯಾಂಟ್ರಿ ರಸ್ತೆ,ಕಾಫಿ ಬೋರ್ಡ ಎದುರು, ಬೆಂಗಳೂರು.
16. ಕರ್ನಾಟಕ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ 4 ನೇಮಹಡಿ,ಕೃಷ್ಣ ಭವನ, ರಾಣಿ ಚೆನ್ನಮ್ಮ ವೃತ್ತ, ಹಡ್ಸನ್ ವೃತ್ತ,ನೃಪತುಂಗ ರಸ್ತೆ ಬೆಂಗಳೂರು.
17. ಕರ್ನಾಟಕ ರಾಜ್ಯ ಅಲ್ಪ ಸಂಖ್ಯಾಂತರ ಆಯೋಗ,5ನೇ ಮಹಡಿ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, ಡಾ. ಬಿ.ಆರ್ ಅಂಬೇಡ್ಕರ್ ವೀಧಿ, ಬೆಂಗಳೂರು-560001.
18. ಅಧ್ಯಕ್ಷರು,ಚೈಲ್ಡ್ ರೈಟ್ ಟ್ರಸ್ಟ್ High point , ಚಾಲುಕ್ಯ ಹೋಟೆಲ್ ಪಕ್ಕ, ಬೆಂಗಳೂರು.
19. ಈ ಕಛೇರಿಯ ಎಲ್ಲಾ ಅಧಿಕಾರಿಗಳಿಗೆ.

**ಮಾಹಿತಿ ಸಂಗ್ರಹಣೆಗಾಗಿ ವಿವಿಧ ಹಂತಗಳಲ್ಲಿನ ಸಮಿತಿ ರಚನೆ ಹಾಗೂ ಮೇಲ್ವಿಚಾರಣೆ:**

**ರಾಜ್ಯ ಮಟ್ಟದ ಸಮಿತಿ:**

| | |
|---|---|
| ಮಾನ್ಯ ಅಪರ ಮುಖ್ಯಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು | ಅಧ್ಯಕ್ಷರು |
| ಪ್ರಧಾನ ಕಾರ್ಯದರ್ಶಿಗಳು(ಪ್ರಾ ಮತ್ತು ಪ್ರೌ), ಶಿಕ್ಷಣ ಇಲಾಖೆ | ಸದಸ್ಯ ಕಾರ್ಯದರ್ಶಿಗಳು |
| ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ | ಸದಸ್ಯರು |
| ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಇಲಾಖೆ | ಸದಸ್ಯರು |
| ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ | ಸದಸ್ಯರು |
| ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ | ಸದಸ್ಯರು |

**ಜಿಲ್ಲಾ ಮಟ್ಟದ ಸಮಿತಿ:**

| | |
|---|---|
| ಜಿಲ್ಲಾಧಿಕಾರಿಗಳು | ಅಧ್ಯಕ್ಷರು |
| ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ | ಉಪಾಧ್ಯಕ್ಷರು |
| ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು | ಸದಸ್ಯರು |
| ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯ ಕಾರ್ಯದರ್ಶಿ |
| ಉಪನಿರ್ದೇಶಕರು(ಅಭಿವೃದ್ಧಿ), ಸಾರ್ವಜನಿಕ ಶಿಕ್ಷಣ ಇಲಾಖ | ಸದಸ್ಯರು |
| ಉಪನಿರ್ದೇಶಕರು, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| ಯೋಜನಾ ನಿರ್ದೇಶಕರು, ಕಾರ್ಮಿಕ ಇಲಾಖೆ | ಸದಸ್ಯರು |
| ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ | ಸದಸ್ಯರು |
| ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| ಜಿಲ್ಲಾ ಆರೋಗ್ಯ ಅಧಿಕಾರಿ | ಸದಸ್ಯರು |
| ಜಿಲ್ಲಾ ಉಪಯೋಜನಾ ಸಮನ್ವಯಾಧಿಕಾರಿಗಳು, ಸ.ಶಿ.ಅ | ಸದಸ್ಯರು |

**ತಾಲ್ಲೂಕು ಮಟ್ಟದ ಸಮಿತಿ:**

| | |
|---|---|
| ತಹಶೀಲ್ದಾರರು | ಅಧ್ಯಕ್ಷರು |
| ಕಾರ್ಯನಿರ್ವಹಣಾಧಿಕಾರಿಗಳು, ತಾಲ್ಲೂಕು ಪಂಚಾಯಿತಿ | ಉಪಾಧ್ಯಕ್ಷರು |
| ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ | ಸದಸ್ಯ ಕಾರ್ಯದರ್ಶಿ |
| ವೃತ್ತ ನಿರೀಕ್ಷಕರು, ಪೊಲೀಸ್ ಇಲಾಖೆ | ಸದಸ್ಯರು |
| ಡಯಟ್ ನೋಡಲ್ ಅಧಿಕಾರಿ, ಸಾ.ಶಿ.ಇ | ಸದಸ್ಯರು |
| ಶಿಶು ಅಭಿವೃದ್ಧಿ ಯೋಜನಾಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ | ಸದಸ್ಯರು |
| ಕಾರ್ಮಿಕ ಅಧಿಕಾರಿ, ಕಾರ್ಮಿಕ ಇಲಾಖೆ | ಸದಸ್ಯರು |
| ಸಹಾಯಕ ನಿರ್ದೇಶಕರು, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆ | ಸದಸ್ಯರು |
| ವಿಸ್ತರಣಾಧಿಕಾರಿ, ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ | ಸದಸ್ಯರು |
| ತಾಲ್ಲೂಕು ಆರೋಗ್ಯ ಅಧಿಕಾರಿ | ಸದಸ್ಯರು |
| ಬಿ.ಆರ್.ಸಿ ತಾಲ್ಲೂಕು ಕ್ಷೇತ್ರ ಸಂಪನ್ಮೂಲ ಕೇಂದ್ರ | ಸದಸ್ಯರು |